# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 587 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ). |
| ಉತ್ತರಿಸುವ ಸಚಿವರು | ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು |
| ಉತ್ತರಿಸಬೇಕಾದ ದಿನಾಂಕ | 13-12-2018 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕರ್ನಾಟಕ ಲಲಿತಕಲಾ ವಿಶ್ವವಿದ್ಯಾಲಯ ಸ್ಥಾಪಿಸಲು ಸರ್ಕಾರ ನಿರ್ಣಯ ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ ಯಾವ ವರ್ಷದಲ್ಲಿ ನಿರ್ಣಯಿಸಲಾಯಿತು; | ಹೌದು<br>ಕರ್ನಾಟಕ ಲಲಿತಕಲಾ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು 2013-14ನೇ ಸಾಲಿನಲ್ಲಿ ಪರಿಗಣಿಸಲಾಗಿದೆ. |
| ಆ) | ಲಲಿತಕಲಾ ಕಲಾ ವಿಶ್ವವಿದ್ಯಾಲಯ ಪ್ರಾರಂಭಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಪ್ರಸ್ತಾಪಿತ ಕರ್ನಾಟಕ ಲಲಿತಕಲಾ ವಿಶ್ವವಿದ್ಯಾಲಯದ ಸ್ಥಾಪನೆಯ ಪೂರ್ವಭಾವಿ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 97 ಯುಎನ್ಇ 2012, ದಿನಾಂಕ: 19.03.2013ರನ್ವಯ ವಿಶೇಷಾಧಿಕಾರಿಗಳನ್ನು ನೇಮಿಸಲಾಗಿದೆ. ಈ ವಿಶ್ವವಿದ್ಯಾಲಯದ ಸ್ಥಾಪನೆ ಸಂಬಂಧ ದೇಶದ ವಿವಿಧ ಭಾಗಗಳ ಗಣ್ಯರು, ವಿದ್ವಾಂಸರು, ಲಲಿತಕಲಾ ತಜ್ಞರು, ವಿಶ್ರಾಂತ ಕುಲಪತಿಗಳೊಂದಿಗೆ ಪರ್ಯಾಲೋಚಿಸಿ ಹಾಗೂ ಹಾಲಿ ಅಸ್ತಿತ್ವದಲ್ಲಿರುವ ಲಲಿತಕಲಾ ವಿಶ್ವವಿದ್ಯಾಲಯಗಳು/ ಸಂಸ್ಥೆಗಳಿಗೆ ಭೇಟಿನೀಡಿ ವಿಶೇಷಾಧಿಕಾರಿಗಳು ವರದಿ ಸಲ್ಲಿಸಿರುತ್ತಾರೆ. ಸದರಿ ವರದಿಯಲ್ಲಿ ಬಾಗಲಕೋಟೆ ಜಿಲ್ಲೆಯ ಬಾದಾಮಿ ಸಮೀಪದ ಖ್ಯಾಡ ಗ್ರಾಮದಲ್ಲಿ ಸುಮಾರು 430 ಎಕರೆ ಕೃಷಿಗೆ ಯೋಗ್ಯವಲ್ಲದ ಜಮೀನನ್ನು ಗುರುತಿಸಲಾಗಿದೆ.<br>ಲಲಿತಕಲೆಯು ಪ್ರದರ್ಶನ ಕಲೆಗಳ ಅವಿಭಾಜ್ಯ ಅಂಗವಾಗಿದ್ದು, ಈಗಾಗಲೇ ರಾಜ್ಯದಲ್ಲಿ ಸಂಗೀತ ಮತ್ತು ಪ್ರದರ್ಶನ ಕಲೆಗಳು ಅಸ್ತಿತ್ವದಲ್ಲಿರುತ್ತದೆ. ಈ ಅಯಾಮದ ಆಧಾರದ ಮೇಲೆ ಲಲಿತಕಲೆಗೆ ಪ್ರತ್ಯೇಕ ವಿಶ್ವವಿದ್ಯಾಲಯ ಸ್ಥಾಪಿಸುವ ಸಾಧಕ-ಭಾದಕಗಳ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಇ) | ಈ ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವುದಕ್ಕಾಗಿ ಇತ್ತೀಚೆಗೆ ಸರ್ಕಾರ ಅನುದಾನ ಬಿಡುಗಡೆ ಮಾಡಿದೆಯೇ? (ಮಾಹಿತಿ ನೀಡುವುದು) | ಪ್ರಸ್ತಾಪಿತ ಕರ್ನಾಟಕ ಲಲಿತಕಲಾ ವಿಶ್ವವಿದ್ಯಾಲಯದ ಸ್ಥಾಪನೆಯ ಪೂರ್ವಭಾವಿ ಕೆಲಸ ಕಾರ್ಯಗಳಿಗಾಗಿ, ಸಿಬ್ಬಂದಿ ವೇತನಕ್ಕಾಗಿ ಹಾಗೂ ಕಛೇರಿ ವೆಚ್ಚಗಳಿಗಾಗಿ ಸರ್ಕಾರದಿಂದ ಬಿಡುಗಡೆ ಮಾಡಲಾದ ಅನುದಾನದ ವಿವರಗಳು ಈ ಕೆಳಗಿನಂತಿರುತ್ತದೆ. |

| ವರ್ಷ | ಮೊತ್ತ (ಲಕ್ಷಗಳಲ್ಲಿ) |
|---|---|
| 2013-14 | 82.00 |
| 2016-17 | 6.00 |
| 2017-18 | 31.70 |

ಸಂಖ್ಯೆ: ಇಡಿ 415 ಯುಆರ್‌ಸಿ 2018

(ಜಿ.ಟಿ. ದೇವೇಗೌಡ)
ಉನ್ನತ ಶಿಕ್ಷಣ ಸಚಿವರು